# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ-ಮೇಲ್ ವಿಳಾಸ : director.ahr.kptcl@gmail.com


**ಸಂಖ್ಯೆ KPTCL/GMT/CIVL(B9)/13/2022-MANAGER ESTATE (E-36776)** 16 NOV 2023

## ಸುತ್ತೋಲೆ

**ವಿಷಯ:** ಭಾರತ ಸಂವಿಧಾನದ ಪೀಠಿಕೆಯನ್ನು ನಿಗಮದ ಕಚೇರಿಗಳಲ್ಲಿ ಪ್ರದರ್ಶಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಸಕಇ 69 ಪಕವಿ 2023, ಬೆಂಗಳೂರು ದಿನಾಂಕ 30/06/2023.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ ರವರ ಪತ್ರ ಸಂಖ್ಯೆ :ಎನರ್ಜಿ 245 ಸಿಒಆರ್‌ಡಿ 2023 ದಿನಾಂಕ 27/09/2023.

*******************

ರಾಜ್ಯಾದ್ಯಂತ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕ ಸ್ವಾಯತ್ತ ಸಂಸ್ಥೆಗಳು, ನಿಗಮ ಮಂಡಳಿಗಳು ಹಾಗೂ ಸಹಕಾರ ಸಂಘಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳಲ್ಲಿ, ಹಾಗೂ ಎಲ್ಲಾ ರೀತಿಯ ಶಿಕ್ಷಣ ಸಂಸ್ಥೆಗಳು ಸಂವಿಧಾನ ಪೀಠಿಕೆ ಭಾವಚಿತ್ರವನ್ನು ಎದ್ದು ಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸಲು ಉಲ್ಲೇಖ (1) ರ ಆದೇಶದಲ್ಲಿ ಸೂಚಿಸಲಾಗಿದೆ. ಸದರಿ ಆದೇಶದ ಪ್ರತಿಯನ್ನುಸುತ್ತೋಲೆಯೊಂದಿಗೆ ಮಾಹಿತಿಗಾಗಿ ಲಗತ್ತಿಸಲಾಗಿದೆ.

ಈ ಹಿನ್ನಲೆಯಲ್ಲಿ, ಭಾರತ ಸಂವಿಧಾನದ ಪೀಠಿಕೆಯನ್ನು ನಿಗಮದ ಕಛೇರಿಗಳಲ್ಲಿ ಎದ್ದು ಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸಲು ನಿಗಮದ ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ, ಬೆಂಗಳೂರು.

**ಪ್ರತಿಗಳು:**

1. ಎಲ್ಲಾ ಮುಖ್ಯ ಇಂಜಿನಿಯರ್‌ಗಳು (ವಿ),ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
4. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ (ಸಿವಿಲ್),ಕವಿಪ್ರನಿನಿ.
5. ಅಧೀಕ್ಷಕ ಇಂಜಿನಿಯರ್ (ವಿ) (ಐ.ಟಿ ) ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು-ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸುವುದು.

6. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು (ವಿ)/(ಸಿವಿಲ್) ,ಕವಿಪ್ರನಿನಿ.
8. ಎಲ್ಲಾ ಉಪ-ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
9. ಲೆಕ್ಕಾಧಿಕಾರಿ (ಕೋಡಿಫಿಕೇಶನ್), ಕವಿಪ್ರನಿನಿ,ಕಾವೇರಿ ಭವನ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು( ಹಣಕಾಸು)/ ನಿರ್ದೇಶಕರು(ಪ್ರಸರಣ)/ ನಿರ್ದೇಶಕರು (ಆ ಮತ್ತು ಮಾ.ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಶ್ರೀ.ಆರ್.ಹೆಚ್.ಲಕ್ಷ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ:659),ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ,ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ, ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.

# ಕರ್ನಾಟಕ ಸರ್ಕಾರ

ಸಂಖ್ಯೆ: ಎನರ್ಜಿ 245 ಸಿಓಆರ್‌ಡಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:27.09.2023.

M.D.
30 SEP 2023
K.P.T.C.L

**ಇವರಿಂದ:-**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ,
ಬೆಂಗಳೂರು-1.

**ಇವರಿಗೆ:-**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ.
5. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ, ಮೈಸೂರು.
7. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಕಾರ್ಖಾನೆ, ಮೈಸೂರು ರಸ್ತೆ, ಬಾಪೂಜಿ ನಗರ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್, ತುಮಕೂರು ಮೈನ್ ರಸ್ತೆ, ಯಶವಂತಪುರ, ಬೆಂಗಳೂರು.
12. ಮುಖ್ಯ ವಿದ್ಯುತ್ ಪರಿವೀಕ್ಷಕರು, ವಿದ್ಯುತ್ ಪರಿವೀಕ್ಷಣಾಲಯ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಬೆಂಗಳೂರು.

| ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು ಪ್ರವ್ಯ (ಪಾಂ) | |
|---|---|
| (ಐಟಿ ಮತ್ತು ಎಂಐಎಸ್. | |
| ಉಪ್ರವ್ಯ (ಆಡಿಟ್ ಮತ್ತು ವಿವಿಧ) | |
| ಉಪ್ರವ್ಯ (ಪ್ರಾಜೆಕ್ಟ್) | |
| ಉಪ್ರವ್ಯ (ಸಿವಿಲ್) | ✓ |
| ಆಪ್ತ ಕಾರ್ಯದರ್ಶಿ | |

**ಮಾನ್ಯರೇ,**

ವಿಷಯ: ಭಾರತ ಸಂವಿಧಾನ ಪೀಠಿಕೆಯನ್ನು ಕಛೇರಿ/ನಿಗಮ/ಸಂಸ್ಥೆಯಲ್ಲಿ ಅಳವಡಿಸಿಕೊಳ್ಳುವಂತೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿರುವ ಬಗ್ಗೆ.

ಉಲ್ಲೇಖ: ಸಮಾಜ ಕಲ್ಯಾಣ ಇಲಾಖೆ ಇವರ ಅ.ಸ. ಪತ್ರ ಸಂಖ್ಯೆ:ಸಕಇ 69 ಪಕವಿ 2023 ದಿನಾಂಕ:13.09.2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅ.ಸ. ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಎದ್ದು ಕಾಣುವಂತೆ ಭಾರತ ಸಂವಿಧಾನ ಪೀಠಿಕೆಯಲ್ಲಿ ಪ್ರದರ್ಶಿಸಲು ಸಮಾಜ ಕಲ್ಯಾಣ ಇಲಾಖೆಯಿಂದ ದಿನಾಂಕ:28.08.2023 ರಂದು ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 3*2 ಅಡಿ ಅಳತೆಯ ಭಾರತ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಒದಗಿಲಾಗುತ್ತಿದ್ದು, ಇದನ್ನು ಕಛೇರಿಯಲ್ಲಿ ಎದ್ದು ಕಾಣುವಂತೆ ಪ್ರದರ್ಶಿಸಲು ಭಾರತ ಸಂವಿಧಾನ ಪೀಠಿಕೆಯನ್ನು ಅಳವಡಿಸಿಕೊಳ್ಳುವಂತೆ ಕೋರಿರುತ್ತಾರೆ.

ಆದ್ದರಿಂದ, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ,
27/09 ಇಂಧನ ಇಲಾಖೆ.

ನಿರ್ದೇಶಕರು
(ಆಡಳಿತ & ಮಾ.ಸಂ)

E-36776 ಪ್ರವ್ಯ (ಸಿವಿ)

ಮೇಜರ್ ಮಣಿವಣ್ಣನ್ ಪಿ, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ

ACLE-65281412/2023
16/09/2023

ಅರೆ ಸರ್ಕಾರಿ ಪತ್ರ ಸಂಖ್ಯೆ:ಸಕಇ 69 ಪಕವಿ 2023 ದಿನಾಂಕ:13-09-2023

ಮಾನ್ಯರೇ,

ಭಾರತ ಸಂವಿಧಾನವನ್ನು ದಿನಾಂಕ:26ನೇ ನವೆಂಬರ್ 1949 ರಂದು ನಮಗೆ ನಾವೇ ಅಂಗೀಕರಿಸಿ ಅರ್ಪಿಸಿಕೊಂಡಿದ್ದು, ಸಂವಿಧಾನದ ಪೀಠಿಕೆಯು ಸಂವಿಧಾನದ ಸಾರಾಂಶವಾಗಿದೆ. ಇದರಲ್ಲಿ ದೇಶದ ನಾಗರಿಕರಿಗೆ ಮಾರ್ಗದರ್ಶನ ನೀಡುವ ತತ್ವಗಳನ್ನು ಅಳವಡಿಸಿಕೊಳ್ಳಲಾಗಿದೆ.

ಭಾರತದ ಸಂವಿಧಾನವು ದೇಶದ ಎಲ್ಲಾ ನಾಗರೀಕರಲ್ಲಿ ಏಕತೆ ಮತ್ತು ಸಮಗ್ರತೆಯನ್ನು ತಾರತಮ್ಯವಿಲ್ಲ ಎಂಬುದನ್ನು ಖಚಿತಪಡಿಸಿಕೊಂಡು ಅಂತರಾಷ್ಟ್ರೀಯ ಶಾಂತಿ ಮತ್ತು ಸಹಕಾರವನ್ನು ಉತ್ತೇಜಿಸಲು ಪ್ರಯತ್ನಿಸುತ್ತದೆ. ಅಲ್ಲದೇ ಸಂವಿಧಾನದ ಮೌಲ್ಯಗಳು ಮತ್ತು ತತ್ವಗಳನ್ನೊಳಗೊಂಡಂತೆ ಮತ್ತು ನಾಗರಿಕರಲ್ಲಿ ಸಂವಿಧಾನದ ಪೀಠಿಕೆಯಲ್ಲಿರುವ ಸಾಮಾಜಿಕ ನ್ಯಾಯ, ಸ್ವಾತಂತ್ರ್ಯ ಸಮಾನತೆ ಹಾಗೂ ಭ್ರಾತೃತ್ವದ ಕುರಿತು ಅರಿವು ಮೂಡಿಸುವುದಕ್ಕಾಗಿ, ಪೀಠಿಕೆಯಲ್ಲಿ ನಮೂದಿಸಲಾದ ತತ್ವಗಳನ್ನು ಎಲ್ಲಾ ನಾಗರಿಕರು ಅಳವಡಿಸಿಕೊಂಡು ಅಂತರ್ಗತಗೊಳಿಸಿದಾಗ ಮಾತ್ರ ಸಂವಿಧಾನದ ಉದ್ದೇಶಗಳನ್ನು ಸಾಧಿಸಲು ಸಾಧ್ಯವಾಗುತ್ತದೆ.

ರಾಜ್ಯ ಸಚಿವ ಸಂಪುಟದ ಅನುಮೋದನೆಯಂತೆ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಎದ್ದು ಕಾಣುವಂತೆ ಭಾರತ ಸಂವಿಧಾನ ಪೀಠಿಕೆಯನ್ನು ಪ್ರದರ್ಶಿಸಲು ಸಮಾಜ ಕಲ್ಯಾಣ ಇಲಾಖೆಯಿಂದ ದಿನಾಂಕ:28-08-2023ರಂದು ಸರ್ಕಾರದ ಆದೇಶ ಸಂಖ್ಯೆ:ಸಕಇ 69 ಪಕವಿ 2023 ಅನ್ನು ಹೊರಡಿಸಲಾಗಿದೆ. ಈ ಹಿನ್ನಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 3*2 ಅಡಿ ಅಳತೆಯ ಭಾರತ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಒದಗಿಸಲಾಗುತ್ತಿದ್ದು, ಇದನ್ನು ತಮ್ಮ ಕಛೇರಿಯಲ್ಲಿ ಎದ್ದು ಕಾಣುವಂತೆ ಪ್ರದರ್ಶಿಸಲು ಹಾಗೂ ತಮ್ಮ ಅಧೀನದ ಕಛೇರಿ/ನಿಗಮ/ಸಂಸ್ಥೆಯಲ್ಲಿ ಇದೇ ಮಾದರಿಯ ಭಾರತ ಸಂವಿಧಾನ ಪೀಠಿಕೆಯನ್ನು ಅಳವಡಿಸಿಕೊಳ್ಳುವಂತೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಇವರಿಗೆ,
ಗೌರವ್ ಗುಪ್ತ, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ,
ವಿಕಾಸಸೌಧ,
ಬೆಂಗಳೂರು.

ಗೌರವ್ ಗುಪ್ತ, ಭಾ.ಆ.ಸೇ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಇಂಧನ ಇಲಾಖೆ

19/9 20/9/2023

ಸಮಾಜ ಕಲ್ಯಾಣ ಇಲಾಖೆ

ಕೊಠಡಿ ಸಂ: 232/233, 2ನೇ ಮಹಡಿ, ವಿಕಾಸಸೌಧ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001
ದೂರವಾಣಿ: 080-22034567, ಸಕಇ ಸಹಾಯವಾಣಿ : 94823 00400
E-mail : major.manivannan.office.1972@gmail.com

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಭಾರತ ಸಂವಿಧಾನದ ಪೀಠಿಕೆಯನ್ನು ರಾಜ್ಯದ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಪ್ರಾರ್ಥನಾ ಸಮಯದಲ್ಲಿ ಓದುವ ಮತ್ತು ಪ್ರತಿಜ್ಞೆ ಮಾಡುವ ಮೂಲಕ ಪೀಠಿಕೆಯ ತತ್ವಗಳನ್ನು ಅಳವಡಿಸಿಕೊಳ್ಳುವುದು ಹಾಗೂ ರಾಜ್ಯದ ವ್ಯಾಪ್ತಿಯಲ್ಲಿರುವ ಎಲ್ಲಾ ಸಾರ್ವಜನಿಕ ಕಛೇರಿಗಳು, ಪ್ರಮುಖ ಸ್ಥಳಗಳಲ್ಲಿ, ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಸಂವಿಧಾನ ಪೀಠಿಕೆಯನ್ನು ಪ್ರದರ್ಶಿಸುವ ಬಗ್ಗೆ.

**ಓದಲಾಗಿದೆ:** ದಿನಾಂಕ:15-06-2023 ರಂದು ಜರುಗಿದ ಸಚಿವ ಸಂಪುಟದ ಸಭೆಯ ತೀರ್ಮಾನ (ಸಂಖ್ಯೆ:ಸಿ.329/2023).

*****

**ಪ್ರಸ್ತಾವನೆ:-**

1. ಭಾರತ ಸಂವಿಧಾನವನ್ನು ದಿನಾಂಕ:26ನೇ ನವೆಂಬರ್ 1949 ರಂದು ನಮಗೆ ನಾವೇ ಅಂಗೀಕರಿಸಿ ಅರ್ಪಿಸಿಕೊಂಡಿದ್ದು, ಸಂವಿಧಾನದ ಪೀಠಿಕೆಯು ಸಂವಿಧಾನದ ಸಾರಾಂಶವಾಗಿದೆ ಮತ್ತು ಇದರಲ್ಲಿ ರಾಜ್ಯ ಸರ್ಕಾರ ಮತ್ತು ನಾಗರಿಕರಿಗೆ ಮಾರ್ಗದರ್ಶನ ನೀಡುವ ತತ್ವಗಳನ್ನು ಅಳವಡಿಸಿಕೊಳ್ಳಲಾಗಿದೆ.

2. ಪೀಠಿಕೆಯಲ್ಲಿ ನಮೂದಿಸಲಾದ ತತ್ವಗಳನ್ನು ಎಲ್ಲಾ ನಾಗರಿಕರಲ್ಲಿ ಅಳವಡಿಸಿಕೊಂಡು ಅಂತರ್ಗತಗೊಳಿಸಿದಾಗ ಮಾತ್ರ ಸಂವಿಧಾನದ ಉದ್ದೇಶಗಳನ್ನು ಸಾಧಿಸಲು ಸಾಧ್ಯವಾಗುತ್ತದೆ.

3. ಪೀಠಿಕೆಯಲ್ಲಿ ನಮೂದಿಸಲಾದ ಮೊದಲ ತತ್ವವು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಒದಗಿಸುವುದು ಎಂದು ಇರುತ್ತದೆ. ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು ಮತ್ತು ಇತರ ದುರ್ಬಲ ವರ್ಗಗಳ ಕಲ್ಯಾಣದ ಜವಾಬ್ದಾರಿಯನ್ನು ಹೊಂದಿರುತ್ತದೆ. ಪ್ರತಿಯೊಬ್ಬರಿಗೂ ಸಾಮಾಜಿಕ ಮತ್ತು ಆರ್ಥಿಕ ನ್ಯಾಯವನ್ನು ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದು ಸಮಾಜ ಕಲ್ಯಾಣ ಇಲಾಖೆಯ ಪ್ರಮುಖ ಕಾರ್ಯವಾಗಿರುತ್ತದೆ.

4. ಈ ನಿಟ್ಟಿನಲ್ಲಿ, ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಮತ್ತು ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಇವರು ಸಂವಿಧಾನಿಕ ಪೀಠಿಕೆಯಲ್ಲಿನ ತತ್ವಗಳನ್ನು ಸರ್ಕಾರಿ ನೌಕರರು, ನಾಗರಿಕರು ಹಾಗೂ

ವಿಶೇಷವಾಗಿ ವಿದ್ಯಾರ್ಥಿಗಳಲ್ಲಿ ಪರಿಣಾಮಕಾರಿಯಾಗಿ ಹೆಚ್ಚಾಗಿ ಪ್ರಚುರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿರುತ್ತಾರೆ.

5. ಸಮಾಜ ಕಲ್ಯಾಣ ಇಲಾಖೆಯು ಸಲ್ಲಿಸಿರುವ ಪ್ರಸ್ತಾವನೆಗೆ ದಿನಾಂಕ:15-06-2023 ರಂದು ಜರುಗಿದ ಸಚಿವ ಸಂಪುಟದ ಸಭೆಯಲ್ಲಿ ಅನುಮೋದನೆ ನೀಡಿ, ಅದರಂತೆ ಅನುಷ್ಠಾನಗೊಳಿಸುವ ಬಗ್ಗೆ ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡಿರುತ್ತದೆ.

    1. ರಾಜ್ಯದ ವಿಧಾನಸಭೆ ಮತ್ತು ವಿಧಾನ ಪರಿಷತ್ತುಗಳ ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಭಾರತದ ಸಂವಿಧಾನ ಪೀಠಿಕೆಯನ್ನು ಓದುವ ಬಗ್ಗೆ ಮತ್ತು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಗೌರವಾನ್ವಿತ ಸಭಾಧ್ಯಕ್ಷರು ಹಾಗೂ ಸಭಾಪತಿಗಳಿಗೆ ಮನವಿ ಟಿಪ್ಪಣಿಗಳನ್ನು ಸಲ್ಲಿಸುವುದು.
    2. ಕರ್ನಾಟಕ ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪ್ರಾರ್ಥನಾ ಸಮಯದಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದು ಹಾಗೂ ಪ್ರತಿಜ್ಞೆಗೈಯುವ ಮುಖಾಂತರ ಪೀಠಿಕೆಯಲ್ಲಿ ಅಳವಡಿಸಲಾದ ಸಂವಿಧಾನಿಕ ತತ್ವಗಳನ್ನು ಅಳವಡಿಸಿಕೊಳ್ಳುವುದು.
    3. ರಾಜ್ಯಾದ್ಯಂತ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕ ಸ್ವಾಯತ್ತ ಸಂಸ್ಥೆಗಳು, ನಿಗಮ ಮಂಡಳಿಗಳು ಹಾಗೂ ಸಹಕಾರ ಸಂಘಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳಲ್ಲಿ, ಹಾಗೂ ಎಲ್ಲಾ ರೀತಿಯ ಶಿಕ್ಷಣ ಸಂಸ್ಥೆಗಳು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದು ಕಾಣುವಂತೆ ಅನುಬಂಧದಲ್ಲಿ ನಮೂದಿಸಿರುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವುದು.

6. ಸಚಿವ ಸಂಪುಟವು ಸಮಾಜ ಕಲ್ಯಾಣ ಇಲಾಖೆಗೆ ಮೇಲಿನ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವಲ್ಲಿ ಯಾವುದೇ ಉಲ್ಲಂಘನೆಯಾದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲು ಅಧಿಕಾರ ನೀಡಿದೆ.

ಈ ಮೇಲಿನವುಗಳನ್ನು ಅನುಷ್ಠಾನಗೊಳಿಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ : ಸಕಇ 69 ಪಕವಿ 2023, ಬೆಂಗಳೂರು</u>**
**<u>ದಿನಾಂಕ: 30-06-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಈ ಕೆಳಕಂಡಂತೆ ಆದೇಶಿಸಿದೆ.

1. ಕರ್ನಾಟಕ ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪ್ರಾರ್ಥನಾ ಸಮಯದಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದು ಹಾಗೂ ಎಲ್ಲರೂ ಸಂವಿಧಾನದ ಪೀಠಿಕೆಗೆ ಬದ್ಧರಾಗುವುದು. ಸಂವಿಧಾನಿಕ ತತ್ವಗಳನ್ನು ತಮ್ಮ ಜೀವನ ಹಾಗೂ ಕರ್ತವ್ಯಗಳಲ್ಲಿ ಅಳವಡಿಸಿಕೊಳ್ಳಲು ಪ್ರತಿಜ್ಞೆಗೈಯುವುದು.

2. ರಾಜ್ಯಾದ್ಯಂತ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕ ಸ್ವಾಯತ್ತ ಸಂಸ್ಥೆಗಳು, ನಿಗಮ ಮಂಡಳಿಗಳು ಹಾಗೂ ಸಹಕಾರ ಸಂಘಗಳ ಆವರಣದ ಪ್ರಮುಖ ಸ್ಥಳಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳಲ್ಲಿ, ಹಾಗೂ ಎಲ್ಲಾ ರೀತಿಯ ಶಿಕ್ಷಣ ಸಂಸ್ಥೆಗಳು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದು ಕಾಣುವಂತೆ ಅನುಬಂಧದಲ್ಲಿ ನಮೂದಿಸಿರುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವುದು.
3. ರಾಜ್ಯದ ವಿಧಾನಸಭೆ ಮತ್ತು ವಿಧಾನ ಪರಿಷತ್ತುಗಳ ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಭಾರತದ ಸಂವಿಧಾನ ಪೀಠಿಕೆಯನ್ನು ಓದುವ ಕುರಿತು ಗೌರವಾನ್ವಿತ ಸಭಾಧ್ಯಕ್ಷರು ಹಾಗೂ ಸಭಾಪತಿಗಳಿಗೆ ಮನವಿ ಟಿಪ್ಪಣಿಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಸಲ್ಲಿಸುವುದು.

ಸದರಿ ಆದೇಶವನ್ನು ದಿನಾಂಕ:15-06-2023 ರಂದು ಜರುಗಿದ ರಾಜ್ಯ ಸಚಿವ ಸಂಪುಟ ಸಭೆಯು ಟಿಪ್ಪಣಿ ಸಂಖ್ಯೆ:ಸಿ.329/2023 ರಲ್ಲಿ ಅನುಮೋದಿಸಿರುವಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮೇಜರ್ ಮಣಿವಣ್ಣನ್ ಪಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಎಲ್ಲಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಯವರಿಗೆ.
6. ಸರ್ಕಾರದ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು ಸಚಿವಾಲಯ, ವಿಧಾನಸೌಧ, ಬೆಂಗಳೂರು.

9. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ದೂರದರ್ಶನ ಕೇಂದ್ರ, ಬೆಂಗಳೂರು.
12. ನಿರ್ದೇಶಕರು, ಆಕಾಶವಾಣಿ, ಬೆಂಗಳೂರು.
13. ನಿರ್ದೇಶಕರು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ಇಲಾಖೆ, ಬೆಂಗಳೂರು.
14. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
16. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು
17. ಎಲ್ಲಾ ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

*****

# PROCEEDINGS OF THE GOVERNMENT OF KARANAKA

Subject: Preamble to the Constitution of India-internalising the principles enumerated in the Preamble by reading & taking pledge on it in the daily assembly of students in educational institutions and display of the Preamble in all the Educational Institutions and in all public offices and important places under the jurisdiction of the Govt of Karnataka.

Ref: Cabinet decision dated:15.06.2023 vide No. C-329/2023.

****

**Preamble:**

1. The Constitution of India has been adopted and given to ourselves on the 26th November, 1949. The Preamble of the Constitution is a summary of the Constitution and it enumerates the guiding the principles for the state, the government and the citizens.

2. The principles enumerated in the Preamble need to be imbibed and internalised in the mind of all the citizens. Only then the vision of the Constitution can be achieved.

3. The first principle enumerated in the Preamble is Justice, Social, economic and political. The Social Welfare Department of the Government of Karnataka has been mandated with the responsibility of welfare of the Scheduled Caste, the Scheduled Tribes and other weaker sections of the population. It is this department's task to work towards ensuring justice; social and economic.

4. It is in this regard, the Hon'ble Chief Minister of Karnataka, Shri.Siddaramaiah and the Hon'ble Minister for Social Welfare Department, Dr. H.C.Mahadevappa, have directed to take such steps to disseminate the Preamble of the Constitution for internalisation of the principles enumerated therein by the officials, citizens and the students in particular.

5. Accordingly, a proposal was submitted to the Cabinet on 15th June, 2023 and the cabinet aprooved and directed the Social Welfare dept to issue a Government order to bring to effect the following:

   i. The Preamble of the Constitution of India need to be read in both the Assembly and council at the starting of each session, and a request note to be submitted to the Hon'ble Speaker and the Chairman of the Council to this effect.

   ii. The Preamble of the Constitution of India shall be read in the assembly of students and teachers in all the educational institutions within the state of Karnataka, and pledge to be taken by all who are present in such assembly to adhere to the values enumerated in the Constitution.

   iii. In addition to that, the Preamble of the Constitution shall be displayed in both Kannada and English language, as prescribed in the annexure to this order in all the educational institutions, Government and Semi-Government offices and Public autonomous bodies, Corporations and Boards, Co-operative Societies and Offices of Local bodies in the important places of their premises.

6. The cabinet also authorised the social welfare dept to take appropriate action in case of any violation in implementing the said direction.

To give effect to the above decisions, the following order is issued.

**Government Order No: SWD 69 PKV 2023 BENGALURU**
**Dated: 30.06.2023.**

As per the above discussion, it is ordered that:

1. The Preamble of the Constitution of India shall be read in the assembly of students/teachers in all the education institutions within the state of Karnataka, and a pledge to be taken by all who are present in such assemblies to adhere to the Preamble of the Constitution in their work and life.

2. In addition to that, the Preamble of the Constitution shall be displayed in both Kannada and English language, as prescribed in the annexure to this order in all the educational institutions, Government and Semi-Government offices and Public autonomous bodies, Corporations and Boards, Co-operative Societies and Offices of Local bodies in the important places of their premises.

3. A request note to be submitted to the Hon'ble Speaker and the Chairman by Social Welfare Department regarding reading of Preamble of the Constitution of India in both the Assembly and Council at the starting of each session.

This Government Order is being issued in pursuance of the Cabinet decision vide No: C 329/2023, dated: 15.06.2023.

By Order and in the name of the
**Governor of Karnataka**

(Major Manivannan, P.)
**Principal Secretary to Government,**
**Social Welfare Department.**

**To:**

1. The Chief Secretary to the Government of Karnataka, Vidhana Soudha, Bengaluru.
2. The Additional Chief Secretary to the Chief Minister, Government of Karnataka, Vidhana Soudha, Bengaluru.
3. The Additional Chief Secretary to the Government of Karnataka, Department of Higher Education, M S Building, Bengaluru.
4. The Principal Secretary to the Government of Karnataka, Department of School Education and Literacy, M S Building, Bengaluru.
5. All Additional Chief Secretararies/Principal Secretaries/ Secretaries to the Government of Karnataka.
6. The Secretary to the Government of Karnataka, Department of Information and Public Relations, Bengaluru.
7. The Secretary, Karnataka Legislative Assembly, Bengaluru.
8. The Secretary, Karnataka Legislative Council, Bengaluru.
9. The Commissioner, Department of Social Welfare, Bengaluru.
10. The Commissioner, Department of Indformation and Public Relations, Bengaluru.
11. The Director, Doordarshan, Bengaluru.
12. The Director, Akashavani, Bengaluru.

13. The Director, Department of Printing, Stationery and Publications.
14. The Deputy Commissioners of all Districts.
15. The Chief Executive Officers of all the Zilla Panchayats.
16. Kalyana Kendra, 24/7 Helpdesk, Department of Social Welfare, Yavanika, Nrupatunga Road, Dr B R Ambedkar Veedhi, Bengaluru.
17. Office Copy.

**Copy for kind information:**

1. The Private Secretary to the Hon'ble Minister for Social Welfare, Govt of Karnataka, Vidhana Soudha, Bengaluru.
2. The Private Secretary to the Hon'ble Minister for Higher Education, Govt of Karnataka, Vikasa Soudha, Bengaluru.
3. The Private Secretary to the Hon'ble Minister for Primary & Secondary Education, Govt of Karnataka, Vikasa Soudha, Bengaluru.
4. The Private Secretary to the Principal Secretary to the Government, Department of Social Welfare, Vikasa Soudha, Bengaluru.

*****